# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1098
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ.ರಾಥೋಡ್
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 13-03-2020

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಸಾರಿಗೆ ಸಂಸ್ಥೆಯಿಂದ ಹಿರಿಯ ನಾಗರಿಕರಿಗೆ ನೀಡುತ್ತಿರುವ ಸೌಲಭ್ಯಗಳೇನು: | ಕರ್ನಾಟಕದ ಸಾರಿಗೆ ಸಂಸ್ಥೆಗಳಿಂದ ಹಿರಿಯ ನಾಗರಿಕರಿಗೆ ಈ ಕೆಳಕಂಡ ಸವಲತ್ತುಗಳನ್ನು ಒದಗಿಸಲಾಗುತ್ತಿದೆ:<br>➢ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ 60 ವರ್ಷ ಹಾಗೂ ಅದಕ್ಕೂ ಮೇಲ್ಪಟ್ಟ ವಯಸ್ಸಿನ ಹಿರಿಯ ನಾಗರಿಕರಿಗೆ ಟಿಕೆಟ್ ಪ್ರಯಾಣ ದರದಲ್ಲಿ ಶೇ.25ರಷ್ಟು ರಿಯಾಯಿತಿ ಒದಗಿಸಲಾಗುತ್ತಿದೆ (ನಗರ, ಹೊರವಲಯ, ಸಾಮಾನ್ಯ, ವೇಗದೂತ, ಅರೆ ಸುವಿಹಾರಿ ಮತ್ತು ರಾಜಹಂಸ ಬಸ್ಸುಗಳಿಗೆ ಹಾಗೂ ಬೆಂ.ಮ.ಸಾ.ಸಂಸ್ಥೆಯ ಸಾಮಾನ್ಯ ಮತ್ತು ವಜ್ರ ಸೇವೆಗಳಿಗೆ ಮಾತ್ರ ಅನ್ವಯಿಸುತ್ತದೆ).<br>➢ ಹಿರಿಯ ನಾಗರೀಕರಿಗೆ ರಿಯಾಯಿತಿ ಪ್ರಯಾಣ ಸೌಲಭ್ಯವು ನಿಗಮವು ಆಚರಣೆಗೊಳಿಸುವ ಅಂತರರಾಜ್ಯ ಸೇವೆಗಳಿಗೂ ಅನ್ವಯಿಸುತ್ತದೆ.<br>➢ ಹಿರಿಯ ನಾಗರೀಕರು ಪ್ರಯಾಣ ದೂರದ ಯಾವುದೇ ಮಿತಿಯಿಲ್ಲದೆ ಈ ರಿಯಾಯಿತಿ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ.<br>➢ ಹಿರಿಯ ನಾಗರಿಕರಿಗೆ ಮಾಸಿಕ ಪಾಸ್‌ಗಳಲ್ಲಿ ಶೇ.10 ರಷ್ಟು ರಿಯಾಯಿತಿ ನೀಡಲಾಗುತ್ತಿದೆ.<br>➢ ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಮತ್ತು ಈ.ಕ.ರ.ಸಾ.ಸಂಸ್ಥೆಗಳು ಆಚರಣೆ ಮಾಡುತ್ತಿರುವ ಸಾಮಾನ್ಯ ಮತ್ತು ವೇಗದೂತ ಸಾರಿಗೆಗಳಲ್ಲಿ ಹಿರಿಯ ನಾಗರಿಕರಿಗೆ 02 ಆಸನಗಳನ್ನು, ಬೆಂ.ಮ.ಸಾ.ಸಂಸ್ಥೆಯ ಸಾಮಾನ್ಯ ವಾಹನಗಳಲ್ಲಿ 06 ಆಸನಗಳನ್ನು ಮತ್ತು ವಜ್ರ ವಾಹನಗಳಲ್ಲಿ 02 ಆಸನಗಳನ್ನು ಕಾಯ್ದಿರಿಸಲಾಗಿದೆ. |
| ಆ | ಮಹಾರಾಷ್ಟ್ರ ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಶೇ.50 ರಷ್ಟು ರಿಯಾಯಿತಿ ನೀಡಲಾಗುತ್ತಿದ್ದು, ಕರ್ನಾಟಕದಲ್ಲಿಯೂ ಈ ರಿಯಾಯಿತಿ ನೀಡಲಾಗುವುದೇ? | ಸಾರಿಗೆ ಸಂಸ್ಥೆಗಳ ಆರ್ಥಿಕ ಪರಿಸ್ಥಿತಿಯನ್ನು ಆಧರಿಸಿ ಈ ಬಗ್ಗೆ ಪರಿಶೀಲಿಸಿ ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು. |

ಸಂಖ್ಯೆ: ಟಿಡಿ 77 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು